# ಕುವೆಂಪು ವಿಶ್ವವಿದ್ಯಾನಿಲಯ

ನಿರ್ದೇಶಕರ ಕಾರ್ಯಾಲಯ,
ದೂರ ಶಿಕ್ಷಣ ನಿರ್ದೇಶನಾಲಯ
ಜ್ಞಾನ ಸಹ್ಯಾದ್ರಿ, ಶಂಕರಘಟ್ಟ - 577 451, ಶಿವಮೊಗ್ಗ ಜಿಲ್ಲೆ, ಕರ್ನಾಟಕ
ದೂರವಾಣಿ : 08282 256450 ಮತ್ತು 256246


ಸಂಖ್ಯೆ:ಕುವಿ:ದೂಶಿನಿ-7(ಎ):2017-18/796 ದಿನಾಂಕ : 13.07.2017

## ಅಧಿಸೂಚನೆ

ವಿಷಯ:- ದೂರ ಶಿಕ್ಷಣ ನಿರ್ದೇಶನಾಲಯದ ಎಲ್ಲಾ ಕೋರ್ಸ್‌ಗಳಿಗೆ ಪ್ರವೇಶ ಪಡೆಯುವ ಅಂತಿಮ ದಿನಾಂಕದ ವಿಸ್ತರಣೆ ಕುರಿತು.

ಉಲ್ಲೇಖ:- 1) ಅಧಿಸೂಚನೆ ಸಂಖ್ಯೆ : ಕುವಿ:ದೂಶಿನಿ-7(ಎ):2017-18:656 ದಿನಾಂಕ 22.06.2017
2) ಮಾನ್ಯ ಕುಲಸಚಿವರ ಅನುಮೋದನೆ ದಿನಾಂಕ: 11.07.2017

-*-

ಉಲ್ಲೇಖ (1) ರ ಅಧಿಸೂಚನೆಯಲ್ಲಿ ದೂರ ಶಿಕ್ಷಣ ನಿರ್ದೇಶನಾಲಯದ ಪ್ರಥಮ/ದ್ವಿತೀಯ/ಅಂತಿಮ ಪದವಿ ಹಾಗೂ ಸ್ನಾತಕೋತ್ತರ ಪದವಿ, ಡಿಪ್ಲೋಮ ಕೋರ್ಸ್‌ಗಳಿಗೆ (ಎಂ.ಬಿ.ಎ. ಮತ್ತು ಬಿ.ಎಸ್ಸಿ., ಕೋರ್ಸ್‌ಗಳನ್ನು ಹೊರತುಪಡಿಸಿ) ಪ್ರವೇಶ ಪಡೆಯುವ ಕೊನೆಯ ದಿನಾಂಕವನ್ನು ರೂ. 400/- ರ ದಂಡ ಶುಲ್ಕದೊಂದಿಗೆ ದಿನಾಂಕ 30.06.2017 ರ ವರೆಗೆ ವಿಸ್ತರಿಸಲಾಗಿತ್ತು.

ಪ್ರವೇಶ ಪಡೆಯುವ ಕೊನೆಯ ದಿನಾಂಕವನ್ನು ವಿಸ್ತರಿಸುವಂತೆ ವಿದ್ಯಾರ್ಥಿಗಳ ಹಾಗೂ ಅಧ್ಯಯನ ಕೇಂದ್ರಗಳ ಸಂಯೋಜನಾಧಿಕಾರಿಗಳ ಮೌಖಿಕ ಹಾಗೂ ಲಿಖಿತ ಮನವಿ ಮೇರೆಗೆ ಈ ಕೆಳಕಂಡ ಷರತ್ತಿಗೊಳಪಟ್ಟು ಪ್ರಥಮ/ದ್ವಿತೀಯ/ಅಂತಿಮ ಪದವಿ ಹಾಗೂ ಸ್ನಾತಕೋತ್ತರ ಪದವಿ, ಡಿಪ್ಲೋಮ ಕೋರ್ಸ್‌ಗಳಿಗೆ (ಎಂ.ಬಿ.ಎ., ಎಂ.ಎಸ್ಸಿ., ಮತ್ತು ಬಿ.ಎಸ್ಸಿ., ಕೋರ್ಸ್‌ಗಳನ್ನು ಹೊರತುಪಡಿಸಿ) ಪ್ರಥಮ ವರ್ಷಕ್ಕೆ ಪ್ರವೇಶ ಪಡೆಯುವ ಕೊನೆಯ ದಿನಾಂಕವನ್ನು ರೂ. 400/- ರ ದಂಡ ಶುಲ್ಕದೊಂದಿಗೆ ದಿನಾಂಕ 15.07.2017 ರವರೆಗೆ ವಿಸ್ತರಿಸಲಾಗಿದೆ.

- ದೂರ ಶಿಕ್ಷಣ ನಿರ್ದೇಶನಾಲಯದಲ್ಲಿ ನೇರ ಪ್ರವೇಶ ಪಡೆಯುವ ವಿದ್ಯಾರ್ಥಿಗಳಿಗೆ ರೂ. 400/- ರ ದಂಡ ಶುಲ್ಕದೊಂದಿಗೆ ಕೊನೆಯ ದಿನಾಂಕ 15.07.2017

- ಅಧ್ಯಯನ ಕೇಂದ್ರಗಳ ಸಂಯೋಜನಾಧಿಕಾರಿಗಳು ದಿನಾಂಕ 30.06.2017 ರವರೆಗೆ ತಮ್ಮ ಅಧ್ಯಯನ ಕೇಂದ್ರಗಳ ಮೂಲಕ ಪ್ರವೇಶ ಪಡೆದ ವಿದ್ಯಾರ್ಥಿಗಳ ಪ್ರವೇಶ ಅರ್ಜಿಗಳನ್ನು ದೂರ ಶಿಕ್ಷಣ ನಿರ್ದೇಶನಾಲಯದಲ್ಲಿ ಸಲ್ಲಿಸಿ ಶುಲ್ಕ ಪಾವತಿಯ ಲೆಕ್ಕಾಚಾರ ಪೂರ್ಣಗೊಂಡಲ್ಲಿ ಹಾಗೂ ಪ್ರವೇಶ ಪಡೆಯುವ ಕೊನೆಯ ದಿನಾಂಕದ ವಿಸ್ತರಣೆಗೆ ಲಿಖಿತ ಮನವಿ ಸಲ್ಲಿಸಿದಲ್ಲಿ ಮಾತ್ರ ರೂ. 400/- ರ ದಂಡ ಶುಲ್ಕದೊಂದಿಗೆ ಪ್ರಥಮ ವರ್ಷಕ್ಕೆ ಪ್ರವೇಶ ಪಡೆಯುವ ಕೊನೆಯ ದಿನಾಂಕವನ್ನು 15.07.2017 ರವರೆಗೆ ವಿಸ್ತರಿಸಲಾಗಿದೆ.

ಆದೇಶದ ಮೇರೆಗೆ,

ನಿರ್ದೇಶಕರು
ದೂರ ಶಿಕ್ಷಣ ನಿರ್ದೇಶನಾಲಯ
ಕುವೆಂಪು ವಿಶ್ವವಿದ್ಯಾನಿಲಯ,
ಶಂಕರಘಟ್ಟ-577 451.

ಗೆ,

ದೂರ ಶಿಕ್ಷಣ ನಿರ್ದೇಶನಾಲಯದ ಮಾನ್ಯತೆ ಪಡೆದು ಘನ ಉಚ್ಛನ್ಯಾಯಾಲಯದ ಮಧ್ಯಂತರ ಆದೇಶವನ್ನು ತಂದಿರುವ ಅಧ್ಯಯನ ಕೇಂದ್ರಗಳ ಎಲ್ಲಾ ಸಂಯೋಜನಾಧಿಕಾರಿಗಳಿಗೆ.

ಪ್ರತಿಗಳು:-

1. ಆಪ್ತ ಸಹಾಯಕರು, ಮಾನ್ಯ ಕುಲಪತಿಗಳು/ಕುಲಸಚಿವರು/ಕುಲಸಚಿವರು (ಪರೀಕ್ಷಾಂಗ)/ ಹಣಕಾಸು ಅಧಿಕಾರಿಗಳ ಕಾರ್ಯಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
2. ಆಪ್ತ ಸಹಾಯಕರು, ನಿರ್ದೇಶಕರು, ದೂರ ಶಿಕ್ಷಣ ನಿರ್ದೇಶನಾಲಯ ಇವರ ಕಾರ್ಯಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
3. ಉಪ ಕುಲಸಚಿವರು ಹಾಗೂ ಅಧೀಕ್ಷಕರು (1) ಮತ್ತು (2), ದೂರ ಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
4. ಎಲ್ಲಾ ವಿಷಯ ನಿರ್ವಾಹಕರು, ದೂರ ಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
5. ಸಂಪರ್ಕಾಧಿಕಾರಿಗಳು, ದೂರ ಶಿಕ್ಷಣ ನಿರ್ದೇಶನಾಲಯ, ದೂರ ಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
6. ಎಲ್ಲಾ ಸಂಶೋಧನಾ ಮತ್ತು ಬೋಧನಾ ಸಹಾಯಕರುಗಳು, ದೂರ ಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ
7. ಕಂಪ್ಯೂಟರ್ ವಿಭಾಗ, ದೂರ ಶಿಕ್ಷಣ ನಿರ್ದೇಶನಾಲಯ, ಕುವೆಂಪು ವಿಶ್ವವಿದ್ಯಾನಿಲಯ, ಶಂಕರಘಟ್ಟ – ಕುವೆಂಪು ವಿಶ್ವವಿದ್ಯಾನಿಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ
8. ಕಛೇರಿ ಪ್ರತಿ